Kannada
29.06.2024 : 1840hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
29.06.2024 : 1840hrs
******

ಮುಖ್ಯಾಂಶಗಳು:

- ವಿಶ್ವವಿದ್ಯಾಲಯಗಳಿಗೆ ಸಮರ್ಥ ಯುವಪೀಳಿಗೆಯ ನಿರ್ಮಾಣದ ಹೊಣೆಗಾರಿಕೆ ಇದೆ - ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್
- ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣ ಸಂಬಂಧ ಮುಖ್ಯಮಂತ್ರಿ ರಾಜೀನಾಮೆಗೆ ಬಿಜೆಪಿ ಆಗ್ರಹ
- ನಾಳೆ ಆಕಾಶವಾಣಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಮನ್ ಕಿ ಬಾತ್ ಕಾರ್ಯಕ್ರಮ ಮತ್ತೆ ಆರಂಭ
- ಇಂದು ರಾತ್ರಿ ಐಸಿಸಿ ಟಿ-೨೦ ವಿಶ್ವಕಪ್‌ಗಾಗಿ ಭಾರತ-ದಕ್ಷಿಣ ಆಫ್ರಿಕಾ ಹಣಾಹಣಿ

*****

ಭಾರತೀಯ ಸಂಸ್ಕೃತಿ ಎಲ್ಲ ಕಾಲಕ್ಕೂ ವಿಶ್ವ ಸಹೋದರತೆ, ವಿಶ್ವಶಾಂತಿ, ಸಮಾನತೆ ಮತ್ತು ಸಾಮರಸ್ಯವನ್ನು ಪ್ರೇರೇಪಿಸುತ್ತದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದ್ದಾರೆ. ಬೆಂಗಳೂರು ನಗರ ವಿಶ್ವವಿದ್ಯಾಲಯದ ೩ನೇ ಘಟಿಕೋತ್ಸವದಲ್ಲಿ ಮಾತನಾಡಿದ ಅವರು, ದೇಶದ ಸಾಂಸ್ಕೃತಿಕ ಸಂಪ್ರದಾಯಗಳನ್ನು ಮತ್ತಷ್ಟು ಬಲಪಡಿಸುವಲ್ಲಿ ಮತ್ತು ದೇಶದಲ್ಲಿ ಸಮಾನತೆ ಹಾಗೂ ಸಾಮರಸ್ಯದ ಸಕಾರಾತ್ಮಕ ವಾತಾವರಣವನ್ನು ಸೃಷ್ಟಿಸುವಲ್ಲಿ, ಶಿಕ್ಷಣದ ಪಾತ್ರ ಮಹತ್ವದ್ದು ಎಂದರು. ಇಡೀ ಪ್ರಪಂಚವೇ ಭಾರತವನ್ನು ಪ್ರಾಚೀನ ಕಾಲದಿಂದಲೂ ವಿಶ್ವಗುರು ಎಂದು ಮಾನ್ಯ ಮಾಡಿತ್ತು. ಈಗಲೂ ಇಡೀ ವಿಶ್ವ ಹಲವು ವಿಷಯಗಳಲ್ಲಿ ಭಾರತವನ್ನು ಗಮನಿಸುತ್ತಿದೆ. ದೇಶವನ್ನು ಅಭಿವೃದ್ಧಿ ಪಥದಲ್ಲಿ ಮುನ್ನಡೆಸುವ ಹೊಣೆಗಾರಿಕೆಯನ್ನು ಯುವಪೀಳಿಗೆ ನಿರ್ವಹಿಸಬೇಕು. ಸಮರ್ಥ ಯುವಪೀಳಿಗೆಯ ನಿರ್ಮಾಣದ ಗುರುತರ ಹೊಣೆಗಾರಿಕೆಯನ್ನು ವಿಶ್ವವಿದ್ಯಾಲಯಗಳು ನಿರ್ವಹಿಸುತ್ತಿವೆ ಎಂದು ರಾಜ್ಯಪಾಲರು ಹೇಳಿದರು. ಪ್ರತಿಭಾವಂತ ನೂತನ ಪದವೀಧರರಿಗೆ ಪ್ರಮಾಣಪತ್ರ ಮತ್ತು ಪದಕ ವಿತರಿಸಲಾಯಿತು. ಸಮಾಜಸೇವೆ ಮತ್ತು ಶೈಕ್ಷಣಿಕ ಕ್ಷೇತ್ರದಲ್ಲಿ ಸಾಧನೆ ಮಾಡಿದ ಎಂ.ಆರ್. ಜೈರಾಮ್ ಮತ್ತು ವಿಶ್ವಪ್ರಸಿದ್ಧ ಕ್ರಿಕೆಟ್ ಆಟಗಾರ ಜಿ.ಆರ್. ವಿಶ್ವನಾಥ್ ಅವರಿಗೆ ಗೌರವ ಡಾಕ್ಟರೇಟ್ ನೀಡಿ ಸನ್ಮಾನಿಸಲಾಯಿತು.

******

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಆಗಿರುವ ಹಗರಣ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಒತ್ತಾಯಿಸಿದ್ದಾರೆ. ಶಿವಮೊಗ್ಗದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜುಲೈ ೩ ರಂದು ಬೆಂಗಳೂರಿನಲ್ಲಿ ಮುಖ್ಯಮಂತ್ರಿಯವರ ನಿವಾಸದ ಎದುರು ಪ್ರತಿಭಟನೆ ನಡೆಸಲಾಗುವುದು. ಬಿಜೆಪಿಯ ಎಲ್ಲ ಶಾಸಕರು, ವಿಧಾನಪರಿಷತ್ ಸದಸ್ಯರು ಮುಖ್ಯಮಂತ್ರಿಗಳ ನಿವಾಸಕ್ಕೆ ಮುತ್ತಿಗೆ ಹಾಕಲಿದ್ದಾರೆ ಎಂದರು. ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣ ಸಂಬಂಧ ಬಿಜೆಪಿ ನಡೆಸಿದ ತೀವ್ರ ಹೋರಾಟದ ನಂತರ ಸಚಿವ ನಾಗೇಂದ್ರ ರಾಜೀನಾಮೆ ನೀಡಿದ್ದಾರೆ. ಆದರೆ ಇದುವರೆಗೂ ಅವರನ್ನು ಎಸ್‌ಐಟಿ ವಿಚಾರಣೆಗೆ ಒಳಪಡಿಸಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಪರಿಶಿಷ್ಟ ಪಂಗಡಕ್ಕೆ ಮೀಸಲಾಗಿದ್ದ ಹಣವನ್ನು ಲೂಟಿ ಮಾಡಲಾಗಿದೆ. ರಾಜ್ಯದಲ್ಲಿ ಹಿಂದೆಂದೂ ಪರಿಶಿಷ್ಟ ಪಂಗಡಕ್ಕೆ ಸೇರಿದ ಹಣದ ಇಷ್ಟು ದೊಡ್ಡ ಹಗರಣ ನಡೆದಿಲ್ಲ. ೧೮೭ ಕೋಟಿ ರೂಪಾಯಿ ಬೃಹತ್ ಮೊತ್ತದ ಹಗರಣ, ಮುಖ್ಯಮಂತ್ರಿ ಗಮನಕ್ಕೆ ಬರದೇ ನಡೆಯಲು ಸಾಧ್ಯವಿಲ್ಲ ಎಂದು ವಿಜಯೇಂದ್ರ ಆರೋಪಿಸಿದರು.

******

ಮುಂದಿನ ೨ ವರ್ಷಗಳಲ್ಲಿ ರೈಲ್ವೆಗೆ ಸಂಬಂಧಿಸಿದಂತೆ ರಾಜ್ಯದಲ್ಲಿ ವಿಭಿನ್ನ ರೀತಿಯಲ್ಲಿ ಅಭಿವೃದ್ಧಿ ಕಾರ್ಯಗಳು ಜರುಗಲಿವೆ ಎಂದು ರೈಲ್ವೆ ಮತ್ತು ಜಲಶಕ್ತಿ ಖಾತೆಗಳ ರಾಜ್ಯ ಸಚಿವ ವಿ. ಸೋಮಣ್ಣ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ನಡೆದ

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜನ ಸಂದಣಿ ಇರುವ ಕಡೆಗಳಲ್ಲಿ ಎಲ್ಲೆಲ್ಲಿ ಸಾಧ್ಯವಿದೆಯೋ ಅಲ್ಲಲ್ಲಿ ರೈಲ್ವೆ ಅಂಡರ್‌ಪಾಸ್ ಮತ್ತು ರೈಲ್ವೆ ಓವರ್ ಬ್ರಿಡ್ಜ್ ನಿರ್ಮಾಣವನ್ನು ಸಮರೋಪಾದಿಯಲ್ಲಿ ಪೂರ್ಣಗೊಳಿಸಲಾಗುವುದು. ೨೮೦ ಕೋಟಿ ರೂಪಾಯಿ ವೆಚ್ಚದಲ್ಲಿ ೧೧ ರೈಲ್ವೆ ಅಂಡರ್‌ಪಾಸ್ ಹಾಗೂ ೨೮೫ ಕೋಟಿ ರೂಪಾಯಿ ವೆಚ್ಚದಲ್ಲಿ ೧೧ ರೈಲ್ವೆ ಓವರ್ ಬ್ರಿಡ್ಜ್ ನಿರ್ಮಾಣವನ್ನು ಈಗಾಗಲೇ ಪೂರ್ಣಗೊಳಿಸಲಾಗಿದೆ ಎಂದು ತಿಳಿಸಿದರು. ಬೆಂಗಳೂರಿನಲ್ಲಿ ಶೀಘ್ರ ಉಪನಗರ ರೈಲ್ವೆ ಯೋಜನೆಯನ್ನು ಜಾರಿಗೆ ತರಲು ಅಗತ್ಯಕ್ರಮ ಕೈಗೊಳ್ಳಲಾಗುವುದು. ಹೆಜ್ಜಾಲ-ಚಾಮರಾಜನಗರ ನಡುವಿನ ೧೪೨ ಕಿಲೋಮೀಟರ್ ಹಳಿ ನಿರ್ಮಾಣಕ್ಕೆ ಶೀಘ್ರ ಸರ್ವೇ ನಡೆಸಿ, ಡಿಪಿಆರ್ ಸಿದ್ಧಪಡಿಸಲಾಗುವುದು. ಈ ಮಾರ್ಗಕ್ಕಾಗಿ ೬೨೭ ಎಕರೆಗಳ ಭೂಸ್ವಾಧೀನ ಅಗತ್ಯವಿದೆ. ಈ ಕುರಿತು ಮುಂದಿನ ೨೦ ದಿನಗಳಲ್ಲಿ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ಸಚಿವರು ಮಾಹಿತಿ ನೀಡಿದರು. ತುಮಕೂರು-ಚಿತ್ರದುರ್ಗ-ದಾವಣಗೆರೆ ಹೊಸ ರೈಲ್ವೆ ಹಳಿ ನಿರ್ಮಾಣಕ್ಕಾಗಿ ೩೫೯ ಕೋಟಿ ರೂಪಾಯಿ ಅಗತ್ಯವಿದ್ದು, ೨೦೨೬ರ ವೇಳೆಗೆ ಕಾಮಗಾರಿ ಪೂರ್ಣಗೊಳಿಸಲಾಗುವುದು. ಮುಂಬರುವ ದಿನಗಳಲ್ಲಿ ಬೆಂಗಳೂರು ಮಹಾನಗರದಲ್ಲಿ ಸಾರ್ವಜನಿಕ ಸಾರಿಗೆಯ ಸುಧಾರಣೆಗಾಗಿ ವರ್ತುಲ ರೈಲ್ವೆ ಮಾರ್ಗ ನಿರ್ಮಾಣಕ್ಕೆ ಈಗಾಗಲೇ ನೀಲನಕ್ಷೆ ರೂಪಿಸಲಾಗಿದೆ. ೨೮೭ ಕಿಲೋಮೀಟರ್ ಉದ್ದದ ಈ ರೈಲ್ವೆ ಯೋಜನೆಯು ನಿಡುವಂದ-ವಡ್ಡರಹಳ್ಳಿ-ದೇವನಹಳ್ಳಿ-ಮಾಲೂರು-ಹೀಲಲಿಗೆ-ಹೆಜ್ಜಾಲ-ಸೋಲೂರು-ನಿಡುವಂದ ನಿಲ್ದಾಣಗಳ ಮೂಲಕ ಬೆಂಗಳೂರು ನಗರದ ಪ್ರಮುಖ ರೈಲ್ವೆ ನಿಲ್ದಾಣಗಳಿಗೆ ಸಂಪರ್ಕ ಕಲ್ಪಿಸುತ್ತದೆ. ಈ ಯೋಜನೆಗೆ ೨೩ ಸಾವಿರ ಕೋಟಿ ರೂಪಾಯಿ ವೆಚ್ಚವಾಗಲಿದ್ದು, ಡಿಪಿಆರ್ ಕಾರ್ಯ ಪ್ರಗತಿಯಲ್ಲಿದೆ ಎಂದರು. ಸಾಮಾನ್ಯ ಜನರಿಗೆ ಕೈಗೆಟಕುವಂತೆ ವಂದೇ ಭಾರತ್ ರೈಲುಗಳ ಟಿಕೆಟ್ ದರವನ್ನು ಪರಿಷ್ಕರಿಸುವ ನಿಟ್ಟಿನಲ್ಲಿ ಶೀಘ್ರ ತೀರ್ಮಾನ ಕೈಗೊಳ್ಳಲಾಗುವುದು ಎಂದು ಸಚಿವ ಸೋಮಣ್ಣ ತಿಳಿಸಿದರು.

******

ರಾಜಕಾರಣ ಎನ್ನುವುದು ನಿಂತ ನೀರಲ್ಲ. ಯಾವುದೇ ರಾಜಕೀಯ ಪಕ್ಷಕ್ಕೂ ಸೋಲು-ಗೆಲುವು ಎನ್ನುವುದು ಇದ್ದದ್ದೇ. ಸೋಲಿನಿಂದ ಧೃತಿಗೆಡದೆ ಪಕ್ಷ ಸಂಘಟಿಸುವ ಮೂಲಕ ಭವಿಷ್ಯದಲ್ಲಿ ಗೆಲುವಿನ ದಿನಗಳನ್ನು ಕಾಣಲು ಸಾಧ್ಯವೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದ್ದಾರೆ. ಬೈಂದೂರಿನಲ್ಲಿಂದು ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಈಗ ಸಂಕಷ್ಟದ ಸ್ಥಿತಿಯಲ್ಲಿದೆ. ಪಕ್ಷದಲ್ಲಿರುವ ಕೆಲವು ನ್ಯೂನತೆಗಳು ಸರಿಯಾಗಬೇಕು. ಇದರಿಂದ ಮುಂಬರುವ ದಿನಗಳಲ್ಲಿ ಪಕ್ಷ ಮತ್ತೆ ಚೇತರಿಸಿಕೊಳ್ಳಲು ಸಾಧ್ಯವಾಗುತ್ತದೆ. ಮುಂದಿನ ಚುನಾವಣೆಯನ್ನು ಗಮನದಲ್ಲಿರಿಸಿಕೊಂಡು ಈಗಲೇ ಸಿದ್ಧತೆ ಮಾಡಿಕೊಳ್ಳಬೇಕು ಎಂದರು.

******

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಕಳೆದ ೧೦ ವರ್ಷಗಳಿಂದ ದೇಶದ ಸಾರ್ವಜನಿಕ ಪ್ರಸಾರ ವ್ಯವಸ್ಥೆಯ ಮೂಲಕ ತಮ್ಮ ಚಿಂತನೆ-ವಿಚಾರಧಾರೆಗಳನ್ನು ದೇಶವಾಸಿಗಳೊಂದಿಗೆ ವಿನಿಮಯ ಮಾಡಿಕೊಳ್ಳುತ್ತಿರುವ ಜನಪ್ರಿಯ ಬಾನುಲಿ ಕಾರ್ಯಕ್ರಮ ಮನ್ ಕಿ ಬಾತ್‌ನ ೧೧೧ನೇ ಸಂಚಿಕೆ ನಾಳೆ ಪ್ರಸಾರವಾಗಲಿದೆ. ಆಕಾಶವಾಣಿ, ದೂರದರ್ಶನದ ರಾಷ್ಟ್ರೀಯ ವಾಹಿನಿ ಮತ್ತು ದೂರದರ್ಶನದ ಸುದ್ದಿವಾಹಿನಿಗಳಲ್ಲಿ ನಾಳೆ ಬೆಳಿಗ್ಗೆ ೧೧ ಗಂಟೆಗೆ ಈ ಕಾರ್ಯಕ್ರಮ ಮತ್ತೆ ಆರಂಭವಾಗಲಿದೆ. ಲೋಕಸಭೆ ಚುನಾವಣೆ ನೀತಿ ಸಂಹಿತೆಯ ಹಿನ್ನೆಲೆಯಲ್ಲಿ ಈ ಕಾರ್ಯಕ್ರಮವನ್ನು ನಿಲ್ಲಿಸಲಾಗಿತ್ತು. ೨೦೧೪ರ ಅಕ್ಟೋಬರ್ ೩ ರಿಂದ ನಿರಂತರವಾಗಿ ಪ್ರತಿತಿಂಗಳ ಕೊನೆಯ ಭಾನುವಾರದಂದು ಪ್ರಧಾನಮಂತ್ರಿ ಮೋದಿಯವರು ಈ ಕಾರ್ಯಕ್ರಮವನ್ನು ಪ್ರಸ್ತುತಪಡಿಸುತ್ತಿದ್ದಾರೆ. ಇದೀಗ ಪ್ರಧಾನಮಂತ್ರಿ ಹುದ್ದೆಯನ್ನು ಮೂರನೇಯ ಅವಧಿಗೆ ವಹಿಸಿಕೊಂಡಿರುವ ನರೇಂದ್ರ ಮೋದಿ ಅವರು, 'ಮನ್ ಕಿ ಬಾತ್' ಕಾರ್ಯಕ್ರಮವನ್ನು ಮುಂದುವರೆಸುತ್ತಾರೆ. ಈ ಕಾರ್ಯಕ್ರಮದಲ್ಲಿ ಹಲವು ಪ್ರಚಲಿತ ಸಂಗತಿಗಳ ಬಗ್ಗೆ ತಮ್ಮ ಮನದಾಳದ ಆಲೋಚನೆಗಳನ್ನು ಹಿಂದಿ ಭಾಷೆಯಲ್ಲಿ ಅವರು ಪ್ರಸ್ತುತ ಪಡಿಸುತ್ತಾರೆ. ನಂತರ ಪ್ರಾದೇಶಿಕ ಭಾಷೆಗಳಲ್ಲಿ ಪ್ರಧಾನಮಂತ್ರಿಯವರ ವಿಚಾರಗಳು ಮೂಡಿಬರುತ್ತವೆ. ಕಾರ್ಯಕ್ರಮವನ್ನು ಎಐಆರ್ ನ್ಯೂಸ್ ವೆಬ್‌ಸೈಟ್ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನ ಎಲ್ಲ ಜಾಲಗಳಲ್ಲೂ ಪ್ರಸಾರ ಮಾಡಲಾಗುತ್ತದೆ.

******

ಸರ್ಕಾರದ ಹಣದಲ್ಲಿ ಯಾವುದೇ ಶಾಸಕರು ವಿದೇಶ ಪ್ರವಾಸ ಮಾಡುತ್ತಿಲ್ಲ. ಸದ್ಯದಲ್ಲಿ ಸರ್ಕಾರದ ಖರ್ಚಿನಲ್ಲಿ ವಿದೇಶಕ್ಕೆ ಕಳುಹಿಸಲು ನಿಯಮದಲ್ಲಿ ಅವಕಾಶವೂ ಇಲ್ಲ ಎಂದು ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಹೇಳಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ವಿವಿಧ ತಾಲೂಕುಗಳಲ್ಲಿ ಬರಪರಿಸ್ಥಿತಿ ಇದೆ. ಸಂತ್ರಸ್ತರಿಗೆ

ಪೂರ್ಣಪ್ರಮಾಣದಲ್ಲಿ ಬರಪರಿಹಾರ ವಿತರಣೆಯಾಗಿಲ್ಲ. ಇಂತಹ ಸಂದರ್ಭದಲ್ಲೂ ಕರ್ನಾಟಕ ವಿಧಾನಮಂಡಲದ ಸಾರ್ವಜನಿಕ ಲೆಕ್ಕಪತ್ರ ಸಮಿತಿ ಸೇರಿದಂತೆ ವಿವಿಧ ಸಮಿತಿಗಳ ಸದಸ್ಯ ಶಾಸಕರು, ಅಧ್ಯಯನದ ಹೆಸರಿನಲ್ಲಿ ವಿದೇಶಗಳಿಗೆ ಪ್ರವಾಸ ಕೈಗೊಳ್ಳಲು ತಯಾರಿ ನಡೆಸಿದ್ದಾರೆ ಎನ್ನುವ ಟೀಕೆಗಳಲ್ಲಿ ಹುರುಳಿಲ್ಲ ಎಂದರು. ಶಾಸಕರ ವಿವಿಧ ಸಮಿತಿಗಳು ದೇಶದ ಹಲವು ರಾಜ್ಯಗಳಿಗೆ ಅಧ್ಯಯನ ಪ್ರವಾಸಕ್ಕೆ ತೆರಳಲು ಮನವಿ ಸಲ್ಲಿಸಿದಾಗ ಮಾತ್ರ ಒಪ್ಪಿಗೆ ನೀಡಲಾಗಿದೆ ಎಂದು ಯು.ಟಿ. ಖಾದರ್ ಹೇಳಿದರು.

******

ಕೋಟ್ಯಾಂತರ ಕ್ರಿಕೆಟ್ ಪ್ರೇಮಿಗಳು ತುದಿಗಾಲಿನಲ್ಲಿ ಎದುರು ನೋಡುತ್ತಿರುವ ಐಸಿಸಿ ಟಿ-೨೦ ವಿಶ್ವಕಪ್ ಫೈನಲ್ ಪಂದ್ಯಕ್ಕೆ ವೆಸ್ಟ್ ಇಂಡೀಸ್‌ನ ಬಾರ್ಬಡೋಸ್ ಕ್ರೀಡಾಂಗಣ ಸಜ್ಜಾಗಿದೆ. ಭಾರತ ಮತ್ತು ದಕ್ಷಿಣ ಆಫ್ರಿಕಾ ತಂಡಗಳು ವಿಶ್ವಕಪ್‌ಗಾಗಿ ಸೆಣಸಲಿವೆ. ಹತ್ತು ವರ್ಷಗಳ ಬಳಿಕ ಟಿ-೨೦ ಮಹಾಸಮರದಲ್ಲಿ ಭಾರತ ಫೈನಲ್‌ಗೆ ತಲುಪಿರುವುದು ಭಾರತೀಯರಲ್ಲಿ ದೊಡ್ಡ ನಿರೀಕ್ಷೆಯನ್ನು ಮೂಡಿಸಿದೆ. ಪಂದ್ಯ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ.

******

**ಸಂಕ್ಷಿಪ್ತ ಸುದ್ದಿಗಳು**

೧. ಕೃಷಿ ನಮ್ಮ ದೇಶದ ಭವಿಷ್ಯವಾಗಿದ್ದು, ಕೃಷಿ ಮತ್ತು ತೋಟಗಾರಿಕೆ ಕೋರ್ಸ್‌ಗಳಿಗೆ ಎಲ್ಲ ಕಾಲಕ್ಕೂ ಪ್ರಾಮುಖ್ಯತೆ ಇದೆ. ವಿದ್ಯಾರ್ಥಿಗಳು ಕೃಷಿ ಪದವಿ ಕೋರ್ಸ್‌ಗಳಿಂದ ಇರುವ ಉದ್ಯೋಗಾವಕಾಶಗಳ ಬಗ್ಗೆ ಮಾಹಿತಿ ಪಡೆಯಬೇಕು ಎಂದು ಶಾಲಾ ಶಿಕ್ಷಣ ಸಚಿವ ಎಸ್. ಮಧುಬಂಗಾರಪ್ಪ ಶಿವಮೊಗ್ಗದಲ್ಲಿಂದು ಹೇಳಿದ್ದಾರೆ.

೨. ಉತ್ತರಕನ್ನಡ ಜಿಲ್ಲೆಯಲ್ಲಿ ಮಾಜಿ ಯೋಧರು, ಅಶಕ್ತರು ಮತ್ತು ಸ್ವಂತ ಮನೆ ಇಲ್ಲದ ಬಡ ಜನರ ಜೀವನ ನಿರ್ವಹಣೆಗೆ ನೆರವಾಗಲು ನಿವೇಶನ ಒದಗಿಸುವ ಸಲುವಾಗಿ ತಹಶೀಲ್ದಾರರು ತಮ್ಮ ವ್ಯಾಪ್ತಿಯಲ್ಲಿ ಲಭ್ಯವಿರುವ ಖಾಲಿ ಜಮೀನಿನ ಬಗ್ಗೆ ತಕ್ಷಣ ಮಾಹಿತಿ ಒದಗಿಸಬೇಕು ಎಂದು ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ್ ಸೂಚಿಸಿದ್ದಾರೆ.

೩. ರಾಜ್ಯ ಸರ್ಕಾರ ನಂದಿನಿ ಹಾಲಿನ ದರವನ್ನು ಹೆಚ್ಚಿಸುವ ಮೂಲಕ ರೈತರಿಗೆ ಅನ್ಯಾಯ ಮಾಡಿದೆ ಎಂದು ಆರೋಪಿಸಿ ಬಿಜೆಪಿ ರೈತ ಮೋರ್ಚಾ ವತಿಯಿಂದ ಇಂದು ರಾಜ್ಯಾದ್ಯಂತ ಪ್ರತಿಭಟನೆ ನಡೆಸಲಾಯಿತು. ಕೊಪ್ಪಳ ಜಿಲ್ಲಾಧಿಕಾರಿ ಕಚೇರಿ ಎದುರು ಬಿಜೆಪಿ ಕಾರ್ಯಕರ್ತರು ಜಾನುವಾರುಗಳೊಂದಿಗೆ ಪ್ರತಿಭಟನೆ ನಡೆಸಿದರು. ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳು ಹಾಲು, ಪೆಟ್ರೋಲ್, ಡೀಸಲ್ ದರ ಏರಿಕೆಗೆ ಕಾರಣ ಎಂದು ಆರೋಪಿಸಲಾಯಿತು. ರಾಮನಗರದಲ್ಲೂ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ನಿತ್ಯ ಬಳಕೆಯ ವಸ್ತುಗಳ ದರ ಹೆಚ್ಚಳದಿಂದ ರೈತರು ಮತ್ತು ಮಧ್ಯಮ ವರ್ಗದ ಜನರ ಬದುಕು ದುಸ್ತರವಾಗಿದೆ ಎಂದು ಘೋಷಣೆ ಕೂಗಿದರು.

೪. ರಾಜ್ಯಸರ್ಕಾರ ಪೆಟ್ರೋಲ್, ಡೀಸಲ್ ಮತ್ತು ಹಾಲಿನ ದರ ಏರಿಕೆಯನ್ನು ತಕ್ಷಣ ಹಿಂಪಡೆಯಬೇಕು ಎಂದು ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿಯಲ್ಲಿಂದು ಸಿಪಿಐಎಂ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

೫. ಕೊಡಗು ಜಿಲ್ಲೆಯಲ್ಲಿ ಇನ್ನೂ ೨ ತಿಂಗಳು ಭಾರೀ ಮಳೆಯಾಗಲಿದ್ದು, ಪ್ರಾಕೃತಿಕ ವಿಕೋಪ ಪರಿಸ್ಥಿತಿ ನಿರ್ವಹಣೆಗೆ ಅಧಿಕಾರಿಗಳು ಹೆಚ್ಚಿನ ನಿಗಾ ವಹಿಸಬೇಕು ಎಂದು ಜಿಲ್ಲಾಧಿಕಾರಿ ವೆಂಕಟರಾಜಾ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

******

**ಇನ್ನು ಹವಾವರ್ತಮಾನ**

ರಾಜ್ಯದ ಕರಾವಳಿ ಮತ್ತು ಒಳನಾಡಿನಲ್ಲಿ ನೈಋತ್ಯ ಮುಂಗಾರು ದುರ್ಬಲಗೊಂಡಿದ್ದು, ಬಹುತೇಕ ಎಲ್ಲ ಜಿಲ್ಲೆಗಳಲ್ಲೂ ಮಳೆಯಾಗಿದೆ. ಆಗುಂಬೆಯಲ್ಲಿ ೧೦ ಸೆಂಟಿಮೀಟರ್, ಕೊಲ್ಲೂರು ೯, ಭಾಗಮಂಡಲದಲ್ಲಿ ೭ ಸೆಂಟಿಮೀಟರ್ ಮಳೆಯಾಗಿದೆ. ಬೆಂಗಳೂರು ಮತ್ತು ಸುತ್ತಮುತ್ತ ಮೋಡಕವಿದ ವಾತಾವರಣವಿದ್ದು, ಆಗಾಗ ಹಗುರಮಳೆ ನಿರೀಕ್ಷಿತ. ಗರಿಷ್ಠ ೩೦, ಕನಿಷ್ಠ ೨೦ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

***END***